# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 19, ಸಂಜಯನಗರ, ಬೆಂಗಳೂರು.**

ಸಂಖ್ಯೆ: ಸ.ಅ/ವಾ-19/ಪಿ.ಆರ್/04/2021-22

ದಿನಾಂಕ:29-11-2021

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/ 2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ: 20-11-2021 ರಂದು ವಾರ್ಡ್ ನಂ:19 ಸಂಜಯನಗರ ಸೆಂಟ್ರಲ್ ಎಕ್ಸೈಜ್ ಲೇಔಟ್‌ನಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**::ಸಭೆಗೆ ಹಾಜರಾಗಿದ್ದವರ ವಿವರಗಳು::**

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಷರಾ |
|---|---|---|---|
| 1. | ಶ್ರೀಮತಿ ತುಳಸಿ ಮದ್ದಾನಿ (ಐ.ಎ.ಎಸ್) ವಿಶೇಷ ಆಯುಕ್ತರು ( ಹಣಕಾಸು) | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು | |
| 2. | ಸಂತೋಷ್‌ಕುಮಾರ್.ಟಿ | ಸದಸ್ಯ ಕಾರ್ಯದರ್ಶಿ ವಾಡ್ ನಂ: 19 | |
| 3. | ಸಲ್ಮಾನ್ | ಹಿರಿಯ ಆರೋಗ್ಯ ಪರಿವೀಕ್ಷಕರು | |
| 4. | ಗಣೇಶ್ | ಕಿರಿಯ ಆರೋಗ್ಯ ಪರಿವೀಕ್ಷಕರು | |
| 5. | ಸಂಚಾರಿ ಪೊಲೀಸ್ | ಆರ್.ಟಿ ನಗರ | |

ವಾರ್ಡ್ ಕಾರ್ಯದರ್ಶಿಗಳಾದ ಶ್ರೀ ಸಂತೋಷ್‌ಕುಮಾರ್. ಟಿ ರವರು ಸಭೆಗೆ ಹಾಜರಾದ ಅಧ್ಯಕ್ಷರು, ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀಮತಿ ತುಳಸಿ ಮದ್ದಾನಿ ಐ.ಎ.ಎಸ್ ರವರಿಗೆ ಮತ್ತು ಸಭೆಯಲ್ಲಿ ಸೇರಿದ ಸಾರ್ವಜನಿಕರಿಗೆ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ವಾರ್ಡ್ ಮುಖ್ಯರಸ್ತೆಗಳಾದ ಸಂಜಯನಗರ ಮುಖ್ಯರಸ್ತೆ ಹಾಗೂ ಭೂಪಸಂದ್ರ ಮುಖ್ಯರಸ್ತೆಯ ಪಾದಚಾರಿ ಮಾರ್ಗದ ದುರಸ್ಥಿಯ ಬಗ್ಗೆ ಮೇಜರ್ ರೋಡ್ಸ್ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಶ್ರೀನಿವಾಸ್ ರವರಿಗೆ ಡಿ.ಎಲ್.ಪಿ ಅವಧಿಯಲ್ಲಿರುವ ಸಂಜಯನಗರ ಮುಖ್ಯರಸ್ತೆಯ ಪಾದಚಾರಿ ಮಾರ್ಗವನ್ನು ದುರಸ್ಥಿಗೊಳಿಸಲು ವಾರ್ಡ್‌ನ ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.
2. ಸಂಜಯನಗರದಲ್ಲಿರುವ ಬೀದಿ ದೀಪಗಳ ದುರಸ್ಥಿಯ ಬಗ್ಗೆ ಕ್ರಮವಹಿಸಲು ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.
3. ವಾರ್ಡ್ ಮುಖ್ಯರಸ್ತೆಗಳಾದ ಸಂಜಯನಗರ ಮುಖ್ಯರಸ್ತೆ ಭೂಪಸಂದ್ರ ಮುಖ್ಯರಸ್ತೆ ಹಾಗೂ ಕಲ್ಪನಾ ಚಾವ್ಲ ರಸ್ತೆಯ ಬದಿಗಳಲ್ಲಿ ಅನಧಿಕೃತವಾಗಿ ವಾಹನಗಳನ್ನು ನಿಲುಗಡೆ ಮಾಡಿರುವ ಬಗ್ಗೆ ಹಾಗೂ ನಿಲುಗಡೆ ಆಗಿರುವ ವಾಹನಗಳನ್ನು ತೆರವುಗೊಳಿಸಲು ಆರ್.ಟಿ ನಗರ ಟ್ರಾಫಿಕ್ ಪೊಲೀಸ್ ಠಾಣೆ ರವರು ಸೂಕ್ತ ಕ್ರಮ ವಹಿಸಲು ವಾರ್ಡ್ ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ ಹಾಗೂ ಸದರಿ ಕಾರ್ಯಾಚರಣೆಯ ಬಗ್ಗೆ ಸಂಚಾರಿ ಪೊಲೀಸ್ ಠಾಣೆ ಆರ್.ಟಿ ನಗರ ರವರು ಕ್ರಮ ವಹಿಸಲು ಸೂಚಿಸಿರುತ್ತಾರೆ.

4. ವಾರ್ಡ್ ಸಮಿತಿ ಸದಸ್ಯರುಗಳು ರುದ್ರಭೂಮಿಯಲ್ಲಿ ಅನೈತಿಕ ಚಟುವಟಿಕೆಗಳು ನಡೆಯುತ್ತಿರುವ ಬಗ್ಗೆ ವಾರ್ಡ್ ನೋಡಲ್ ಅಧಿಕಾರಿಗಳ ಗಮನಕ್ಕೆ ತಂದಿರುತ್ತಾರೆ. ಆಗ ವಾರ್ಡ್ ನೋಡಲ್ ಅಧಿಕಾರಿಗಳು ಸಂಜಯನಗರ ಸಬ್‌ಇನ್ಸ್‌ಪೆಕ್ಟರ್ ರವಿಚಂದ್ರನ್ ರವರಿಗೆ ಈ ಬಗ್ಗೆ ಕ್ರಮವಹಿಸಲು ಸೂಚಿಸಿರುತ್ತಾರೆ.
5. ಬೀದಿ ದೀಪಗಳ ಬಗ್ಗೆ ಹೆಚ್ಚಿನ ಕ್ರಮವಹಿಸಲು ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.
6. ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಂದ ರಸ್ತೆ ಅಗೆತ ಮಾಡಿರುವ ರಸ್ತೆಗಳು ರೆಸ್ಟೊರೆಷನ್ ಕ್ರಮವಹಿಸಲು ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.

ವಾರ್ಡ್‌ನ ಅಧ್ಯಕ್ಷರು ಮಾತನಾಡುತ್ತಾ ಈ ಮೇಲಿನ ಎಲ್ಲಾ ಅಂಶಗಳನ್ನು ಕೂಡಲೇ ಬಗೆಹರಿಸುವಂತೆ ವಾರ್ಡ್ ಕಾರ್ಯದರ್ಶಿಗಳಿಗೆ ತಿಳಿಸುತ್ತಾ ಮತ್ತು ಸಭೆಯಲ್ಲಿ ಹಾಜರಿದ್ದ ಎಲ್ಲಾ ಸಾರ್ವಜನಿಕರಿಗೆ ವಂದನೆಗಳನ್ನು ತಿಳಿಸುತ್ತಾ ಈ ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸದಸ್ಯ ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ. 19, ಸಂಜಯನಗರ

17/2/21
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ.19, ಸಂಜಯನಗರ

**ಪ್ರತಿಯನ್ನು:-**

1. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
3. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
4. ಕಛೇರಿ ಪ್ರತಿ.